# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 18.09.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಬಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎನ್. ಬಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಡಾ॥ ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಸದಸ್ಯರು | ಹಾಜರಿದ್ದರು |
| 4 | ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಗೋವಿಂದರಾಜು ಕೆ. | ಕಂದಾಯ ವಸೂಲಿಗಾರರು ಸ.ಕಂ.ಅ. (ಯಶವಂತಪುರ) | ಸದಸ್ಯರು | ಹಾಜರಿದ್ದರು |
| 6 | ಚನ್ನೇಶಪ್ಪ | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 7 | ಅನಿಲ್ ಕುಮಾರ್ ಎಂ. | ಸಹಾಯಕ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |
| 8 | ಸುಜಾತಾ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 9 | ಸತ್ಯವತಿ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 10 | ಶಿವಪ್ರಕಾಶ್ ಎಂ. | ಬಿ.ಎಲ್.ಓ. ಹೋಂ ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 11 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 12 | ಬಿ. ಜಾನ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

1. ಬಿಬಿಎಂಪಿ ಅರಣ್ಯ ಇಲಾಖೆ:

ಒಣಗಿದ ಮರಗಳನ್ನು ತೆರವುಗೊಳಸಲು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಅದರಂತೆ, ಬಿಬಿಎಂಪಿ ಅರಣ್ಯ ಇಲಾಖೆಯವರು ಸಾರ್ವಜನಿಕರಿಗೆ ಮನವಿ ಪತ್ರ ನೀಡಲು ಸೂಚಿಸಿದ್ದು, ಆದ್ದರಿಂದ ಸಾರ್ವಜನಿಕರಿಗೆ ಮನವಿ ಪತ್ರ ನೀಡಲು ಅಧ್ಯಕ್ಷರು ಸೂಚಿಸಿರುತ್ತಾರೆ.

2. ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಸುವ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬೆಸ್ಕಾಂ) ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

3. ಕಂದಾಯ ವಿಭಾಗ:

ವಾರ್ಡ್-37ರ ವ್ಯಾಪ್ತಿಯಲ್ಲಿ ಕಂಡುಬರುವ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಸುರಿಯುತ್ತಿರುವುದು ಕಂಡುಬರುತ್ತಿದ್ದು, ಅಂತಹ ಜಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್ ನಿರ್ಮಾಣವಾಗುತ್ತಿರುತ್ತದೆ. ಸಂಬಂಧಪಟ್ಟ ನಿವೇಶನದ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲು, ಕಂದಾಯ ಇಲಾಖೆಯವರಿಗೆ ಸೂಚಿಸಿದ್ದು, ಆದರೆ ಇದುವರೆಗೂ ಖಾಲಿ ನಿವೇಶನಗಳ ಮಾಹಿತಿ ನೀಡಿರುವುದಿಲ್ಲ. ವಾಡ್-37ರಲ್ಲಿ ಕಂಡುಬರುವ ಖಾಲಿ ನಿವೇಶನಗಳ ವಿವರಗಳನ್ನು ಇಂಜಿನಿಯರಿಂಗ್ ವಿಭಾಗಕ್ಕೆ ನೀಡಬೇಕೆಂದು ಅಧ್ಯಕ್ಷರು ಮತ್ತೊಮ್ಮೆ ತಿಳಿಸಿದರು.

4. ಕಸದ ವಿಲೇವಾರಿ ಬಗ್ಗೆ:

ಮೇಲ್ವಿಚಾರಕರು ಮಾತನಾಡಿ, ವಾರ್ಡ್‌ನ ವಿವಿಧ ಭಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದನ್ನು ತಡೆಯುವ ಸಲುವಾಗಿ, ಬ್ಲ್ಯಾಕ್‌ಸ್ಪಾಟ್‌ಗಳಲ್ಲಿ ಕಸ ಹಾಕುವವರಿಗೆ ದಂಡವಿಧಿಸುವ ಬಗ್ಗೆ ನಾಮಫಲಕ ಅಳವಡಿಸಲು ಕೋರಿದ್ದು, ಇದರ ಬಗ್ಗೆ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರೊಂದಿಗೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದಾಗಿ ಸಭೆಗೆ ತಿಳಿಸಿದರು. .

5. ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ವಾರ್ಡ್‌ಲ್ಲಿ ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಕೆ. ಉಮೇಶ್)
ಸ.ಕಾ.ನಿ.ಅ. ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಾರ್ಡ್ ಸಂಖ್ಯೆ:37 ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ